JANUARY 28, 2025

AKASHAVANI - DHARWAD

PRADESH SAMACHARA (KANNADA) 07.05 A.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವರು: ಹರ್ಷವರ್ಧನ ಶೀಲವಂತ

<><><>

ಮುಖ್ಯಾಂಶಗಳು

<><><>

- ಸಣ್ಣ ಹಣಕಾಸು ಸಂಸ್ಥೆಗಳ, ಕಾನೂನು ಬಾಹಿರ ನಡಾವಳಿ ಕಡಿವಾಣಕ್ಕೆ, ರಾಜ್ಯ ಸರ್ಕಾರದಿಂದ, ಕಾನೂನು ಕ್ರಮ.
- ಪಂಚ ಖಾತ್ರಿ ಯೋಜನೆಗಳಿಂದ, ರಾಜ್ಯದ 1 ಕೋಟಿ ಕುಟುಂಬಗಳ ಆರ್ಥಿಕ ಸಬಲೀಕರಣ.
- 18 ಸಾವಿರ ಪೊಲೀಸ್ ಪೇದೆಗಳ ನೇಮಕಾತಿಗೆ, ಗೃಹ ಇಲಾಖೆಯಿಂದ ಶೀಘ್ರ ಅಧಿಸೂಚನೆ.
- ಧಾರವಾಡದ ಉನ್ನತ ಶಿಕ್ಷಣ ಅಕಾದೆಮಿಯಲ್ಲಿ, ಸಹಾಯಕ ಪ್ರಾಧ್ಯಾಪಕರಿಗೆ, 21 ದಿನಗಳ ವೃತ್ತಿ ತರಬೇತಿ.

<><><>

ಈಗ ವಾರ್ತೆಗಳ ವಿವರ

<><><>

ಸಣ್ಣ ಹಣಕಾಸು ಸಂಸ್ಥೆಗಳ, ಕಾನೂನು ಬಾಹಿರ ನಡಾವಳಿಗೆ ಕಡಿವಾಣ ಹಾಕಲು, ಕಂದಾಯ ಖಾತೆ ಸಚಿವ ಕೃ ್ಣ ಬೈರೇಗೌಡ, ಬೆಂಗಳೂರಿನ ವಿಕಾಸ ಸೌಧದಲ್ಲಿ, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿ ್ಠಾಧಿಕಾರಿಗಳ, ಮಹತ್ವದ ಸಭೆ ನಡೆಸಿದರು. ಸಾಲ ವಸೂಲಾತಿ ಹೆಸರಿನಲ್ಲಿ, ಬಡವರಿಗೆ ಕಿರುಕುಳ ನೀಡುತ್ತಿರುವ ಸಣ್ಣ ಹಣಕಾಸು ಸಂಸ್ಥೆಗಳಿಗೆ, ಕಾನೂನು ಪ್ರಕಾರ ಕಡಿವಾಣ ಹಾಕಲು, ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು, ಸಚಿವರು ಸೂಚಿಸಿದ್ದಾಗಿ, ತಿಳಿಸಿದರು.

<><><>

ಸಾಲ ವಸೂಲಾತಿ ನೆಪದಲ್ಲಿ, ಸಣ್ಣ ಹಣಕಾಸು ಸಂಸ್ಥೆಗಳು, ವಸೂಲಾತಿ ಏಜೆಂಟರ ಮೂಲಕ, ಗ್ರಾಹಕರ ಮೇಲೆ ದೌರ್ಜನ್ಯ ಎಸಗಿದಲ್ಲಿ, ಕಠಿಣ ಕಾನೂನು ಕ್ರಮ ಕೈಗೊಳ್ಳುವುದಾಗಿ, ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ ಎಚ್ಚರಿಸಿದ್ದಾರೆ. ಜಿಲ್ಲಾ ಪಂಚಾಯ್ತಿ ಸಭಾಂಗಣದಲ್ಲಿ, ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ, ಅಧ್ಯಕ್ಷತೆವಹಿಸಿ, ಅವರು ಮಾತನಾಡಿದರು.

<><><>

ಹಾವೇರಿ ಜಿಲ್ಲೆಯಲ್ಲಿ, 26 ಮೈಕ್ರೋ ಫೈನಾನ್ಸ್ ಸಂಸ್ಥೆಗಳಿದ್ದು, ಸಾಲ ವಸೂಲಾತಿ ದೌರ್ಜನ್ಯಕ್ಕೆ ಸಂಬಂಧಿಸಿ, 13 ಪ್ರಕರಣಗಳು ದಾಖಲಾಗಿವೆ ಎಂದು, ಜಿಲ್ಲಾ ಪೊಲೀಸ್ ವರಿ ಾಧಿಕಾರಿ ಅಂಶು ಕುಮಾರ ತಿಳಿಸಿದ್ದಾರೆ.

<><><>

ಈ ಮಧ್ಯೆ, ರಾಜ್ಯದ ಎಲ್ಲ ಜಿಲ್ಲಾಧಿಕಾರಿಗಳ ಕಚೇರಿಗಳಲ್ಲಿ, ಸಹಾಯವಾಣಿ ಆರಂಭಿಸಲು ರಾಜ್ಯ ಸರ್ಕಾರ ಕ್ರಮ ಕೈಗೊಂಡಿದೆ.

<><><>

ಮೈಕ್ರೋ ಫೈನಾನ್ಸ್ ಸಾಲ ವಸೂಲಾತಿಗಾಗಿ, ಕಂಪೆನಿಯ ಏಜೆಂಟರು, ಕಾನೂನು ಕೈಗೆ ತೆಗೆದುಕೊಂಡು, ಸಾಲಗಾರರ ಮೇಲೆ ದೌರ್ಜನ್ಯ ಎಸಗುತ್ತಿದ್ದಾರೆ; ಉನ್ನತ ಪೊಲೀಸ್ ಅಧಿಕಾರಿಗಳಿಂದ, ಪ್ರಕರಣಗಳನ್ನು ಗಂಭೀರವಾಗಿ ಪರಿಶೀಲಿಸಿ, ಕ್ರಮ ಜರುಗಿಸುವಂತೆ, ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಸಚಿವ ಪ್ರಲ್ಹಾದ ಜೋಶಿ, ಆಗ್ರಹಿಸಿದ್ದಾರೆ. ಮೈಸೂರಿನಲ್ಲಿ ಮಾತನಾಡಿದ ಅವರು, ಮೈಕ್ರೋ ಫೈನಾನ್ಸ್ ಸಂಸ್ಥೆಗಳು, ಭಾರತೀಯ ರಿಸರ್ವ್ ಬ್ಯಾಂಕ್ ನಿಯಮಾವಳಿಗೆ ಒಳಪಟ್ಟು ವ್ಯವಹರಿಸಬೇಕು. ಪೊಲೀಸರ ಆಶ್ರಯ ಪಡೆದು, ಏಜೆಂಟರು ಕಿರುಕುಳ ನೀಡುತ್ತಿದ್ದಾರೆ ಎಂಬ ಆರೋಪ, ತನಿಖೆಯಾಗಬೇಕು ಎಂದು, ಸಚಿವ ಜೋಶಿ ಒತ್ತಾಯಿಸಿದರು.

<><><>

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ವೈಫಲ್ಯದಿಂದಾಗಿ, ಮೈಕ್ರೋ ಫೈನ್ಯಾನ್ಸ್ ಸಂಸ್ಥೆಗಳ ಹಾವಳಿ ಹೆಚ್ಚಾಗಿದೆ. ರಾಜ್ಯ ಸರ್ಕಾರವೇ ಸಾಲ ನೀಡಿದ್ದರೆ, ಈ ಪರಿಸ್ಥಿತಿ ಎದುರಾಗುತ್ತಿರಲಿಲ್ಲ ಎಂದು, ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ ಬೆಂಗಳೂರಿನಲ್ಲಿ, ಹೇಳಿದ್ದಾರೆ.

<><><>

ಚಾರ್ಮಾಡಿ ಘಾಟ್‌ನ, ಅಣ್ಣಪ್ಪ ಸ್ವಾಮಿ ದೇಗುಲ ಸಮೀಪದ ಅರಣ್ಯದಲ್ಲಿ, ಕಾಡ್ಗಿಚ್ಚು ಕಾಣಿಸಿಕೊಂಡಿದ್ದು, ಗಣನೀಯ ಪ್ರಮಾಣದ ಅರಣ್ಯ ನಾಶವಾಗಿದೆ. ಕಳೆದ ಒಂದು ವಾರದಲ್ಲಿ, ಚಾರ್ಮಾಡಿ ಘಾಟ್‌ನಲ್ಲಿ ಎರಡನೇ ಕಾಡ್ಗಿಚ್ಚು ಪ್ರಕರಣ ವರದಿಯಾಗಿದೆ ಎಂದು, ಮೂಡಿಗೆರೆ ವಲಯ ಅರಣ್ಯಾಧಿಕಾರಿ ಚರಣ್ ಕುಮಾರ್ ತಿಳಿಸಿದ್ದಾರೆ. ಕಾಡ್ಗಿಚ್ಚಿನಿಂದ ಅರಣ್ಯ ಸಂಪತ್ತಿನ ಜೊತೆಗೆ, ವನ್ಯಜೀವಿಗಳು ಸಾವನ್ನಪ್ಪಿರುವ ಸಾಧ್ಯತೆಯಿದೆ ಎಂದು, ಸ್ಥಳೀಯರು ತಿಳಿಸಿದ್ದಾರೆ.

<><><>

ಗುಡ್ಡ ಕುಸಿತ, ಕಾಡ್ಗಿಚ್ಚುಗಳಿಂದ ಪಶ್ಚಿಮಘಟ್ಟಗಳ ರಕ್ಷಣೆಗಾಗಿ, ಪ್ರಾಕೃತಿಕ ವಿಕೋಪಗಳನ್ನು ತಡೆದು, ವೈಜ್ಞಾನಿಕ ಹಾಗೂ ಸುಸ್ಥಿರ ಅಭಿವೃದ್ಧಿಯನ್ನು ಸಾಧ್ಯವಾಗಿಸುವ ಬಗೆ ಹೇಗೆ ಎಂಬ ಬಗ್ಗೆ, ವಿಪತ್ತು ನಿರ್ವಹಣಾ ಇಲಾಖೆಯ ತಜ್ಞ ಸಲಹೆಗಾರ, ಬೆಂಗಳೂರಿನ ಶ್ರೀನಿವಾಸ ರೆಡ್ಡಿ ಪ್ರದೇಶ ಸಮಾಚಾರಕ್ಕಾಗಿ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

<><><>

ತಜ್ಞ ಸಲಹೆಗಾರ ಶ್ರೀನಿವಾಸ ರೆಡ್ಡಿ 45 ಸೆಕೆಂದುಗಳು

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಆಕಾಶವಾಣಿ ಸುದ್ದಿಗಳಿಗಾಗಿ, ನಮ್ಮ X ಖಾತೆ @airnews_dharwad ಹಾಗೂ

ನಮ್ಮ ಫೇಸ್ಬುಕ್ ಖಾತೆ Airrnu Dharwad ಅನುಸರಿಸಿ.

<><><>

ರಾಜ್ಯದ 1 ಕೋಟಿ ಕುಟುಂಬಗಳನ್ನು, ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನದಿಂದ, ಬಡತನ ರೇಖೆಯಿಂದ ಮೇಲೆತ್ತಲಾಗಿದೆ ಎಂದು, ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಹೇಳಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ, ಜಿಲ್ಲಾ ಮಟ್ಟದ ಖಾತ್ರಿ ಯೋಜನೆಗಳ ಅನುಷ್ಠಾನ ಕುರಿತು, ಅವರು ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಖಾತ್ರಿ ಯೋಜನೆಗಳ ಅನುಷ್ಠಾನಕ್ಕೆ 58 ಸಾವಿರ ಕೋಟಿ ರೂಪಾಯಿ ಮೀಸಲಿಟ್ಟು, ಬಡವರ ಆರ್ಥಿಕ ಸಬಲೀಕರಣಕ್ಕೆ ಸರ್ಕಾರ ದೃಢ ನಿರ್ಧಾರ ಕೈಗೊಂಡಿದೆ. ರಾಜ್ಯದ ಬಡ ಜನರ ಬದುಕಿನಲ್ಲಿ, ಪಂಚ ಖಾತ್ರಿ ಯೋಜನೆಗಳು, ಗುಣಾತ್ಮಕ ಬದಲಾವಣೆ ತರಲಿವೆ ಎಂದರು.

<><><>

ನನೆಗುದಿಗೆ ಬಿದ್ದಿದ್ದ 545 ಪಿ.ಎಸ್.ಐ. ಹುದ್ದೆಗಳ ಪೈಕಿ, 402 ಹುದ್ದೆಗಳ ನೇಮಕಾತಿಗೆ, ಆದೇಶಿಸಲಾಗಿದೆ; 18 ಸಾವಿರ ಪೊಲೀಸ್ ಪೇದೆಗಳ ನೇಮಕಾತಿಯನ್ನು, ಹಂತ ಹಂತವಾಗಿ, ಸದ್ಯದಲ್ಲೇ ಮಾಡಲಾಗುವುದು ಎಂದು, ಗೃಹ ಖಾತೆ ಸಚಿವ ಜಿ. ಪರಮೇಶ್ವರ ತಿಳಿಸಿದ್ದಾರೆ. ಯಾದಗಿರಿಯಲ್ಲಿ ನೂತನವಾಗಿ ನಿರ್ಮಿಸಿದ, ನಗರ ಪೊಲೀಸ್ ಠಾಣೆಯ ಕಟ್ಟಡ ಉದ್ಘಾಟಿಸಿ, ಬಳಿಕ ಸುದ್ದಿಗಾರರೊಂದಿಗೆ ಅವರು, ಮಾತನಾಡಿದರು. ಸೈಬರ್ ಅಪರಾಧ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಲಾಗಿದೆ ಎಂದರು.

<><><>

ಧಾರವಾಡದ ಉನ್ನತ ಶಿಕ್ಷಣ ಅಕಾದೆಮಿಯಲ್ಲಿ, ಉನ್ನತ ಶಿಕ್ಷಣ ಆಯುಕ್ತಾಲಯದಿಂದ, ಸಹಾಯಕ ಪ್ರಾಧ್ಯಾಪಕರುಗಳಿಗೆ, 21 ದಿನಗಳ ತರಬೇತಿ ಕಾರ್ಯಕ್ರಮ ಆಯೋಜಿಸಲಾಗುವುದು ಎಂದು, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ತಿಳಿಸಿದ್ದಾರೆ. ಬೆಂಗಳೂರಿನ ಸೆಂಟ್ರಲ್ ಕಾಲೇಜು ಆವರಣದ, ಜ್ಞಾನಜ್ಯೋತಿ ಸಭಾಂಗಣದಲ್ಲಿ, ನೂತನವಾಗಿ ನೇಮಕಗೊಂಡ, ಸಹಾಯಕ ಪ್ರಾಧ್ಯಾಪಕರುಗಳಿಗೆ, "ಹೊಸ ಹಾದಿ" ಒಂದು ದಿನದ ವೃತ್ತಿ ಮಾರ್ಗದರ್ಶನ ಕಾರ್ಯಕ್ರಮ ಉದ್ಘಾಟಿಸಿ, ಅವರು ಮಾತನಾಡಿದರು. ಉನ್ನತ ಶಿಕ್ಷಣ ಅಕಾದೆಮಿಯ ಮೌಲ್ಯವರ್ಧಿತ ತರಬೇತಿಯಲ್ಲಿ ಭಾಗವಹಿಸಿ, ಖಾಸಗಿ ಕ್ಷೇತ್ರದ ಜೊತೆ ಪೈಪೋಟಿಗೆ, ಅಧ್ಯಾಪಕರು ಸನ್ನದ್ಧರಾಗಬೇಕು. ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ, ತಮ್ಮ ಪಾಂಡಿತ್ಯ ಮತ್ತು ಜ್ಞಾನಾರ್ಜನೆಯ ಲಾಭ ಸಿಗಬೇಕು ಎಂದರು.

<><><>

ಕೇರಳದ ಪಾರಂಪರಿಕ ಸಮರ ಕಲೆ ಕಳರಿಪಯಟ್ಟು ಹಾಗೂ ಮಲ್ಲಕಂಬ ಪಟು, ರಾಮನಗರದ, ಹಾಸನ ರಘು ಅವರಿಗೆ, ಕೇಂದ್ರ ಸರ್ಕಾರ ಪದ್ಮಶ್ರೀ ಪುರಸ್ಕಾರ ಘೋಷಿಸಿದೆ. ಪ್ರಸ್ತುತ, ಕನ್ನಡ ಚಿತ್ರರಂಗದ ಖ್ಯಾತ ಸಾಹಸ ಕಲಾ ನಿರ್ದೇಶಕರಾಗಿರುವ ಕೆ.ಎಚ್.ರಘು, ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಸ್ಪೋರ್ಟ್ಸ್ ಪದವಿಧರ. ಹೊಸ ದಿಲ್ಲಿಯ ರಾಷ್ಟ್ರೀಯ ನಾಟಕ ಶಾಲೆಯಲ್ಲಿ ಸಮರ ಕಲೆಯ ಸಂದರ್ಶಕ ಪ್ರಾಧ್ಯಾಪಕ. ರಾಮನಗರದಲ್ಲಿ ಇವರು ಸ್ಥಾಪಿಸಿರುವ, ಕರ್ನಾಟಕ ಸಾಹಸ ಕಲಾ ಅಕಾದೆಮಿಗೆ ಖೇಲೋ ಇಂಡಿಯಾ ಮಾನ್ಯತೆ ದೊರೆತಿದೆ. ಹಾವೇರಿ ಜಿಲ್ಲೆ, ಶಿಗ್ಗಾಂವ ತಾಲೂಕು ಗೊಟಗೋಡಿಯ, ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಇತ್ತೀಚೆಗೆ ರಘು ಅವರಿಗೆ, ಗೌರವ ಡಾಕ್ಟರೇಟ್ ಪ್ರದಾನ ಮಾಡಿದೆ. ಪ್ರದೇಶ ಸಮಾಚಾರಕ್ಕಾಗಿ, ಕೆ.ಎಚ್. ರಘು ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

ಕೆ.ಎಚ್.ರಘು ಧ್ವನಿ 45 ಸೆಕೆಂದುಗಳು

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ಕರ್ನಾಟಕ ಸುವರ್ಣ ಮಹೋತ್ಸವದ ಹಿನ್ನೆಲೆ, ವಿಧಾನಸೌಧದ ಪಶ್ಚಿಮ ದ್ವಾರದಲ್ಲಿ, 25 ಅಡಿ ಎತ್ತರದ, ನಾಡದೇವಿ ಭುವನೇಶ್ವರಿಯ ಕಂಚಿನ ಪ್ರತಿಮೆಯನ್ನು, ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿ ಅನಾವರಣಗೊಳಿಸಿದರು.

<><><>

ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ, ಜಮೀರ್ ಅಹಮದ್ ಖಾನ್ ಅವರು, ಹಂಪಿ ಉತ್ಸವದ, ಲಾಂಛನ ಬಿಡುಗಡೆ ಮಾಡಿದರು.

<><><>

ರಾಯಚೂರು, ಕಲಬುರಗಿ, ಕೊಪ್ಪಳ, ಬಳ್ಳಾರಿ ಹಾಗೂ ಬೀದರ್ ಜಿಲ್ಲೆಗಳ, ಅರಣ್ಯ ಪ್ರದೇಶ ಅಭಿವೃದ್ಧಿಗೆ, 100 ಕೋಟಿ ರೂಪಾಯಿ ಅನುದಾನ ನೀಡುವುದಾಗಿ, ಅರಣ್ಯ ಖಾತೆ ಸಚಿವ ಈಶ್ವರ ಖಂಡ್ರೆ, ರಾಯಚೂರಿನಲ್ಲಿ ಹೇಳಿದರು.

<><><>

ಕೇಂದ್ರ ಹಣಕಾಸು ಖಾತೆ ಸಚಿವರಾದ ನಿರ್ಮಲಾ ಸೀತಾರಾಮನ್, 2025–26ನೇ ಸಾಲಿನ ಬಜೆಟ್‌ನ್ನು, ಫೆಬ್ರವರಿ 1 ರಂದು ಮಂಡಿಸಲಿದ್ದಾರೆ.

<><><>

ಹೊಸ ಪೀಳಿಗೆಯ ಅಭಿರುಚಿಗಳನ್ನು ಪ್ರೋತ್ಸಾಹಿಸಲು, 'ವೇವ್ಸ್ ವೇದಿಕೆ'ಗೆ ಕೇಂದ್ರದ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈ ್ಣವ್ ಚಾಲನೆ ನೀಡಿದರು.

<><><>

'ಮುಡಾ' ಪ್ರಕರಣಕ್ಕೆ ಸಂಬಂಧಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಹಾಗೂ ಸಚಿವ ಬಿ.ಸುರೇಶ್ ಗೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ನೋಟಿಸ್ ನೀಡಿದ್ದಾರೆ.

<><><>

ಧಾರವಾಡ ಜಿಲ್ಲಾ ಮಟ್ಟದ, 8ನೇ ಜನತಾ ದರ್ಶನದಲ್ಲಿ, ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ, 200 ಅಹವಾಲುಗಳನ್ನು ಸ್ವೀಕರಿಸಿ, ಇತ್ಯರ್ಥಕ್ಕೆ ಕಾಲಮಿತಿ ನಿಗದಿ ಪಡಿಸಿದರು.

<><><>

ಕಲಬುರಗಿಯ, ಶ್ರೀ ಶರಣಬಸವೇಶ್ವರ ಅಪ್ಪನ ಕೆರೆ ನಿರ್ವಹಣಾ ಪ್ರಾಧಿಕಾರ ಆಯೋಜಿಸಿದ್ದ, ಮೂರು ದಿನಗಳ ಶಿಶಿರೋತ್ಸವದಲ್ಲಿ, ವಿಜೇತರನ್ನು ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಪುರಸ್ಕರಿಸಿದರು.

<><><>

ಧಾರವಾಡ ಕರ್ನಾಟಕ ವಿದ್ಯಾವರ್ಧಕ ಸಂಘದಲ್ಲಿ, ಇಂದು ಸಂಜೆ 5.15ಕ್ಕೆ, ಎಸ್. ಎಂ. ವೃಷಭೇಂದ್ರಸ್ವಾಮಿಗಳ ಸಂಸ್ಮರಣ ದತ್ತಿ ಉಪನ್ಯಾಸ ಕಾರ್ಯಕ್ರಮ ಆಯೋಜಿತವಾಗಿದೆ. ಹಿರಿಯ ವಿದ್ವಾಂಸ ಜಿ.ಎಂ. ಹೆಗಡೆ ಉಪನ್ಯಾಸ ನೀಡಲಿದ್ದಾರೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- ಸಣ್ಣ ಹಣಕಾಸು ಸಂಸ್ಥೆಗಳ, ಕಾನೂನು ಬಾಹಿರ ನಡಾವಳಿ ಕಡಿವಾಣಕ್ಕೆ, ರಾಜ್ಯ ಸರ್ಕಾರದಿಂದ, ಕಾನೂನು ಕ್ರಮ.

- ಪಂಚ ಖಾತ್ರಿ ಯೋಜನೆಗಳಿಂದ, ರಾಜ್ಯದ 1 ಕೋಟಿ ಕುಟುಂಬಗಳ ಆರ್ಥಿಕ ಸಬಲೀಕರಣ.
- 18 ಸಾವಿರ ಪೊಲೀಸ್ ಪೇದೆಗಳ ನೇಮಕಾತಿಗೆ, ಗೃಹ ಇಲಾಖೆಯಿಂದ ಶೀಘ್ರ ಅಧಿಸೂಚನೆ.
- ಧಾರವಾಡದ ಉನ್ನತ ಶಿಕ್ಷಣ ಅಕಾದೆಮಿಯಲ್ಲಿ, ಸಹಾಯಕ ಪ್ರಾಧ್ಯಾಪಕರಿಗೆ, 21 ದಿನಗಳ ವೃತ್ತಿ ತರಬೇತಿ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ.

<><><>